



ಅರುಣ ಪಿ. ಭಟ್ಟ

## ವಾರಭವಿಷ್ಯ: 24.07.2025ರಿಂದ 30.07.2025ರವರೆಗೆ





ಈ ವಾರ ನಿಮ್ಮ ವರ್ಚಸ್ಸು ವೃದ್ಧಿ ಆಗಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ನಿರೀಕ್ಷೆಗಿಂತ ಹೆಚ್ಚಿನ ಪ್ರಗತಿ. ಶತ್ರುಗಳ ಉಪಟಳ ಹೆಚ್ಚಾಗಲಿದೆ. ವಾರದ ಕೊನೆ ಮೂರು ದಿನ ಅನುಕೂಲ ಸನ್ನಿವೇಶ ಇದೆ. ಆಸ್ತಿ ಖರೀದಿಗೆ ಅವಕಾಶಗಳು ಸೃಷ್ಟಿಯಾಗಲಿವೆ. ಈಗಾಗಲೇ ನೋಂದಣಿಗೆ ಹಣ ಹೊಂದಾಣಿಕೆ ಮಾಡಿಕೊಂಡು, ಕಾಯುತ್ತಿದ್ದಲ್ಲಿ ಈ ವಾರ ಉದ್ದೇಶಿತ ಕಾರ್ಯ ಈಡೇರುತ್ತದೆ. ಶುಭದಿನ: 26. ಶ್ರೀರಾಜರಾಜೇಶ್ವರಿ ಜಪ ಮಾಡಿರಿ.

---

ವಾರದ ಆರಂಭದಲ್ಲಿ ಉದ್ಯೋಗ ಸ್ಥಳದಲ್ಲಿ ಏಳ್ಗೆ ಇದೆ. ನಿಮ್ಮ ಆರೋಗ್ಯ ಉತ್ತಮವಾಗಿ ಇರಲಿದೆ. ಮನೆಯಲ್ಲಿ ಸಂತೋಷದ ವಾತಾವರಣ ಇರುತ್ತದೆ. ಎಂಥ ಬಿಡುವಿಲ್ಲದ ಕೆಲಸದ ಮಧ್ಯೆಯೂ ಸಂಗಾತಿ ಮಕ್ಕಳ ಜೊತೆ ಸಮಯ ಕಳೆಯಲಿದ್ದೀರಿ. ನಿರೀಕ್ಷೆ ಮಾಡಿದ್ದಕ್ಕಿಂತ ಹೆಚ್ಚಿನ ಅನುಕೂಲ ನಿಮಗೆ ಒದಗಿಬರಲಿದೆ. ಮಕ್ಕಳ ಏಳ್ಗೆಯಿಂದ ಹೆಮ್ಮೆ ಮೂಡುತ್ತದೆ. ಶುಭದಿನ: 28. ಶ್ರೀರಾಮರಕ್ಷಾಸ್ತೋತ್ರ ಪಠಿಸಿರಿ.




---




ವಾರದ ಆರಂಭದಲ್ಲೇ ದೇವತಾ ಆರಾಧನೆ ಸಾಧ್ಯತೆ ಇದೆ. ಸಾಮಾಜಿಕ ಕಾರ್ಯಗಳಲ್ಲಿ ಚಟುವಟಿಕೆಯಿಂದ ಪಾಲ್ಗೊಳ್ಳಲಿದ್ದೀರಿ. ಆದಾಯದಲ್ಲಿ ಹೆಚ್ಚಳ ಆಗುವ ಸಾಧ್ಯತೆ ಇದೆ. ಮನೆಯ ವಿಚಾರದಲ್ಲಿ ಗಮನಹರಿಸಬೇಕಾದ ಅಗತ್ಯ ಕಂಡುಬರುತ್ತದೆ. ವಾರದ ಮಧ್ಯಭಾಗದಲ್ಲಿ ವೃತ್ತಿನಿರತರು ಹೆಚ್ಚು ಚಟುವಟಿಕೆಗಳಲ್ಲಿ ತೊಡಗುವ ಸಾಧ್ಯತೆ ಇದೆ. ಪ್ರಗತಿಯ ಹಾದಿಯಲ್ಲಿ ಸಾಗಲಿದ್ದೀರಿ. ಶುಭದಿನ: 29. ಸೌಂದರ್ಯ ಲಹರಿ ಪಠಿಸಿರಿ.

---

ಹಣ ಹೂಡಿಕೆಯಲ್ಲಿ ಉತ್ತಮ ಪ್ರಗತಿ ಇದೆ. ಈ ಅವಧಿಯಲ್ಲಿ ಹೆಚ್ಚು ಹಣ ಖರ್ಚಾಗುತ್ತದೆ. ಉದ್ಯೋಗ ಸ್ಥಳದಲ್ಲಿ ಅಂದುಕೊಂಡ ಸ್ಥಾನಮಾನ ದೊರೆಯುತ್ತದೆ. ಕಾನೂನು ವಿಚಾರಕ್ಕೆ ಸಂಬಂಧಿಸಿದ ಜವಾಬ್ದಾರಿಗಳನ್ನು ಪೂರೈಸಲು ಗಮನ ನೀಡಬೇಕಾಗುತ್ತದೆ. ರಿಯಲ್ ಎಸ್ಟೇಟ್ ವ್ಯವಹಾರಗಳನ್ನು ಮಾಡುವವರಿಗೆ ಪೂರಕ ವಾತಾವರಣ ಸೃಷ್ಟಿ ಆಗಲಿದೆ. ಶುಭದಿನ: 24. ಲಿಂಗಾಷ್ಟಕ ಪಠಿಸಿರಿ





---





ದಾಂಪತ್ಯ ಜೀವನ ಸಂತೋಷವಾಗಿರುತ್ತದೆ. ಬಾಂಧವ್ಯ ಇನ್ನಷ್ಟು ಗಟ್ಟಿಯಾಗುತ್ತದೆ. ಬಹುಕಾಲದ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಿದ್ದೀರಿ. ಪ್ರವಾಸಕ್ಕೆ ತೆರಳುವ ಸಾಧ್ಯತೆ ಇದೆ. ಸಾಮಾಜಿಕವಾಗಿ ವರ್ಚಸ್ಸು ಹೆಚ್ಚಾಗಲಿದೆ. ಇದೇ ವೇಳೆ ಲಾಭದ ಪ್ರಮಾಣದಲ್ಲಿ ಹೆಚ್ಚಳವಾಗಲಿದೆ. ಈ ಅವಧಿಯಲ್ಲಿ ಉದ್ಯೋಗದಲ್ಲಿ ಬಡ್ತಿ ಸಿಗುವ ಅವಕಾಶಗಳು ಹೆಚ್ಚಾಗಿವೆ. ಶುಭದಿನ: 25. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.

---

ವಾರದ ಶುರುವಿನಲ್ಲಿ ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಬಹಳ ಶ್ರಮ ಪಡುತ್ತೀರಿ. ಹಣದ ಅಗತ್ಯವನ್ನು ಪೂರೈಸಿಕೊಳ್ಳುವ ಸಲುವಾಗಿ ಸಾಲಕ್ಕಾಗಿ ಅರ್ಜಿ ಹಾಕಿಕೊಳ್ಳಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ನಿಮ್ಮ ಕರ್ತವ್ಯವನ್ನು ಪೂರ್ಣಗೊಳಿಸುವ ಕಡೆಗೆ ಹೆಚ್ಚಿನ ಗಮನ ವಹಿಸಲಿದ್ದೀರಿ. ಸಣ್ಣ ಪುಟ್ಟ ಮನಸ್ತಾಪಗಳು ಎದುರಾಗಬಹುದು. ಶುಭದಿನ: 26. ವಿಷ್ಣು ಸಹಸ್ರನಾಮ ಪಠಿಸಿರಿ.




---





ಹಣಕಾಸಿನ ಹರಿವು ಹೆಚ್ಚಾಗಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಏಳ್ಗೆ ಇದೆ. ತಾಂತ್ರಿಕ ಕೌಶಲ ಹೆಚ್ಚಿಸಿಕೊಳ್ಳುವುದಕ್ಕೆ ಅವಕಾಶ ದೊರೆಯಲಿದೆ. ವೈವಾಹಿಕ ಜೀವನದಲ್ಲಿ ಸಂತೋಷ ಇರುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಬಹಳ ಹತ್ತಿರದ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ. ಹಣ ಹೂಡಿಕೆ ಲಾಭದಾಯಕವಾಗಿ ಪರಿಣಮಿಸಲಿದೆ. ಶುಭದಿನ: 28. ಶ್ರೀಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.

---

ವಾರದ ಆರಂಭದಲ್ಲಿ ನಿಮ್ಮ ಮೇಲೆ ಒತ್ತಡ ಕಂಡುಬರಲಿದೆ. ನಿಮ್ಮ ಪಾಲಿನ ಕೆಲಸಗಳನ್ನು ವೇಗವಾಗಿ ಪೂರ್ಣಗೊಳಿಸುವಿರಿ. ಸಾಮಾಜಿಕ ಜೀವನದಲ್ಲಿ ವರ್ಚಸ್ಸು ವೃದ್ಧಿಯಾಗಲಿದೆ. ಸಂಗಾತಿಗೆ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ. ಸಂಬಂಧದಲ್ಲಿ ಸುಧಾರಣೆ ಕಾಣಿಸಲಿದೆ. ಕೌಟುಂಬಿಕ ಜೀವನದಲ್ಲಿ ಅತ್ಯುತ್ತಮ ಪ್ರಗತಿ ಇದೆ. ಶುಭದಿನ: 30. ಹನುಮಾನ್ ಚಾಲೀಸ್ ಪಠಿಸಿರಿ.





---





ವಾರದ ಶುರುವಿನಲ್ಲಿ ಪ್ರಗತಿ ಇದೆ. ಪ್ರತಿಷ್ಠೆಯನ್ನು ಹೆಚ್ಚು ಮಾಡಿಕೊಳ್ಳುವ ಕಡೆಗೆ ಪ್ರಯತ್ನಿಸಿ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಆ ಕಾರಣಕ್ಕೆ ನಿಮ್ಮ ಕೆಲಸವನ್ನು ಪರಿಣಾಮಕಾರಿಯಾಗಿ ಪೂರ್ಣಗೊಳಿಸಲು ಯಶಸ್ವಿಯಾಗುತ್ತೀರಿ. ದಾನ ಧರ್ಮಗಳಲ್ಲಿ ನಾನಾ ಬಗೆಯಲ್ಲಿ ಅಡೆತಡೆ ಉಂಟಾಗುತ್ತದೆ. ಈಗಾಗಲೇ ನಿಗದಿಯಾದ ಪ್ರವಾಸ ರದ್ದಾಗಬಹುದು. ಶುಭದಿನ: 24. ಆದಿತ್ಯ ಹೃದಯ ಪಠಿಸಿರಿ.

---

ಹಿಂದೆಂದಿಗಿಂತ ಹೆಚ್ಚು ಸ್ಪರ್ಧಾತ್ಮಕವಾಗಿ ಇರುತ್ತೀರಿ. ಸಂವಹನದ ಕೊರತೆ ಎದ್ದು ಕಾಣಲಿದೆ. ಉದ್ಯಮಿಗಳಿಗೆ ಹಲವು ಬಗೆಯಲ್ಲಿ ಸವಾಲುಗಳು ಎದುರಾಗಲಿವೆ. ಈ ಅವಧಿಯಲ್ಲಿ ಹೆಚ್ಚು ಹಣ ಖರ್ಚು ಮಾಡಲಿದ್ದೀರಿ. ವೈಯಕ್ತಿಕ ಸಂಬಂಧದಲ್ಲಿ ಭಿನ್ನಾಭಿಪ್ರಾಯ ಕಾಣಿಸಿಕೊಳ್ಳಲಿದೆ. ವ್ಯವಹಾರದಲ್ಲಿ ಹೊಸ ಅವಕಾಶವೊಂದು ತೆರೆದುಕೊಳ್ಳುತ್ತದೆ. ಶುಭದಿನ: 28. ಕಾಲಭೈರವನ ಆರಾಧನೆ ಮಾಡಿರಿ.




---




ವಾರದ ಆರಂಭದಲ್ಲಿ ನಿಮ್ಮ ಜವಾಬ್ದಾರಿಯನ್ನು ಪೂರೈಸುವುದಕ್ಕಾಗಿಯೇ ಹೆಚ್ಚು ಸಮಯವನ್ನು ಮೀಸಲಿಡಬೇಕಾಗುತ್ತದೆ. ನಿಮ್ಮ ಬಗ್ಗೆ ಸಹೋದ್ಯೋಗಿಗಳು ಬಹಳ ಹೆಮ್ಮೆ ಪಡುತ್ತಾರೆ. ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಆದಾಯ ಮೂಲಗಳಿಂದ ಹೆಚ್ಚು ಅನುಕೂಲ ಇದೆ. ವಿದೇಶ ಪ್ರಯಾಣ ಮಾಡಲಿದ್ದೀರಿ. ವಾರಾಂತ್ಯದಲ್ಲಿ ನಿಮ್ಮ ಆತ್ಮವಿಶ್ವಾಸ ಹೆಚ್ಚಾಗಲಿದೆ. ಶುಭದಿನ: 25. ಗಣಪತಿಗೆ ದೂರ್ವಾರ್ಚನೆ ಮಾಡಿರಿ.

---

ಭವಿಷ್ಯದ ಬಗ್ಗೆ ನಿರ್ಧಾರ ಮಾಡಲು ಹೆಚ್ಚಿನ ಸಮಯ ನೀಡುತ್ತೀರಿ. ದೂರದ ಪ್ರಯಾಣ ಮಾಡಬೇಕಾಗುತ್ತದೆ. ಪರಿಣಾಮಕಾರಿಯಾಗಿ ಕೆಲಸ ಮಾಡಲು ಗಮನ ನೀಡುತ್ತೀರಿ. ಆರೋಗ್ಯ ಬಾಧೆಗಳು ಈ ಅವಧಿಯಲ್ಲಿ ನಿಮ್ಮನ್ನು ಕಾಡಲಿವೆ. ಹೂಡಿಕೆಯಲ್ಲಿ ಲಾಭವಾಗುವ ಸಾಧ್ಯತೆ ಇದೆ. ವಾರಾಂತ್ಯದಲ್ಲಿ ಪಿತ್ರಾರ್ಜಿತ ಆಸ್ತಿ ವಿಚಾರವಾಗಿ ಶುಭ ಸುದ್ದಿ ದೊರೆಯಲಿದೆ. ಶುಭದಿನ: 29. ದತ್ತಗುರು ಚರಿತ್ರೆ ಪಠಿಸಿರಿ.

